# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರವಾಹ ಪೀಡಿತ ಗ್ರಾಮ ಪಂಚಾಯತಿಗಳಲ್ಲಿ ಆಸ್ತಿಗಳ ಮಾಲೀಕರಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ಉಚಿತವಾಗಿ ವಿತರಿಸಿರುವ ಬಗ್ಗೆ.

ಪ್ರಸ್ತಾವನೆ:

2019 ಮುಂಗಾರು ಋತುವಿನಲ್ಲಿ ಆಗಸ್ಟ್ 1 ರಿಂದ 9 ರವರೆಗೆ ಕರ್ನಾಟಕ ರಾಜ್ಯದಲ್ಲಿ ಬಿದ್ದಂತಹ ಮಹಾ ಮಳೆಗೆ ಹಾಗೂ ಮಹಾರಾಷ್ಟ್ರ ರಾಜ್ಯದಲ್ಲಿನ ಕೃಷ್ಣಾ ಕಣಿವೆ ಜಲಾಶಯಗಳು ತುಂಬಿ ಹರಿದ ನೀರಿನಿಂದ ರಾಜ್ಯದ ಉತ್ತರ ಕರ್ನಾಟಕದ ಹಲವು ಭಾಗಗಳಲ್ಲಿ ಪ್ರವಾಹ ಉಂಟಾಗಿ ನದಿಯ ಅಕ್ಕಪಕ್ಕದ ಪ್ರದೇಶಗಳಿಗೆ ನೀರು ನುಗ್ಗಿ ಅಪಾರ ಪ್ರಮಾಣದ ಜೀವಹಾನಿ ಮತ್ತು ಬೆಳೆಹಾನಿ ಹಾಗೂ ಸಾರ್ವಜನಿಕ ಆಸ್ತಿ ಹಾನಿಯಾಗಿರುತ್ತದೆ. ಇದೇ ಅವಧಿಯಲ್ಲಿ ರಾಜ್ಯದ ಕರಾವಳಿ ಮತ್ತು ಮಲೆನಾಡಿನ ಜಿಲ್ಲೆಗಳಲ್ಲಿಯೂ ಸಹ ಬಾರಿ ಮಳೆಯಿಂದ, ಪ್ರವಾಹ ಪರಿಸ್ಥಿತಿ ಉಂಟಾಗಿರುವುದರಿಂದ ಈ ಪ್ರದೇಶಗಳಲ್ಲಿಯೂ ಸಹ ಅಪಾರ ಪ್ರಮಾಣ ಆಸ್ತಿ ಹಾನಿಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ 22 ಜಿಲ್ಲೆಗಳಲ್ಲಿ ಬರುವ 103 ತಾಲ್ಲೂಕುಗಳನ್ನು ಪ್ರವಾಹ ಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ.

ಪ್ರವಾಹ ಪೀಡಿತ ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಗ್ರಾಮಗಳಲ್ಲಿ ಈಗಾಗಲೇ ಆಸ್ತಿಗಳ ಮಾಲೀಕರಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸಲಾಗಿರುವುದರಿಂದ ಸದರಿ ಆಸ್ತಿಗಳ ಮಾಲೀಕರುಗಳಿಂದ ಬಾಕಿ ಇರುವ ತೆರಿಗೆಯನ್ನು ಪಾವತಿಸಿಕೊಳ್ಳದೇ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ಉಚಿತವಾಗಿ ವಿತರಿಸಲು ಸರ್ಕಾರವು ನಿರ್ಣಯಿಸಿದೆ.

ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 714 ಗ್ರಾಪಂಅ 2018**
**ಬೆಂಗಳೂರು, ದಿನಾಂಕ:01-01-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪ್ರವಾಹ ಪೀಡಿತ ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಗ್ರಾಮಗಳಲ್ಲಿ ಈಗಾಗಲೇ ಆಸ್ತಿಗಳ ಮಾಲೀಕರಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸಲಾಗಿರುವುದರಿಂದ ಸದರಿ ಆಸ್ತಿಗಳ ಮಾಲೀಕರುಗಳಿಂದ ಬಾಕಿ ಇರುವ ತೆರಿಗೆಯನ್ನು ಪಾವತಿಸಿಕೊಳ್ಳದೇ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ಉಚಿತವಾಗಿ ವಿತರಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಮೇಶ್ ಡಿ.ಟಿ) 01/01/2020
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ.) (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ/ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5. ಶಾರಕ/ಹೆಪ್ರ.

(50)

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3. ನಿರ್ದೇಶಕರು (ಪಂ.ರಾಜ್-1) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲ್ಲಾಖೆ ರವರ ಆಪ್ತ ಸಹಾಯಕರು.
4. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.